ಲಿಖಿತ ಮೂಲಕ ಉತ್ತರಿಸುವ

# ಕರ್ನಾಟಕ ವಿಧಾನ ಪರಿಷತ್ತು

## ನೂರ ಮೂವತ್ತೆಂಟನೆಯ ಅಧಿವೇಶನ

## ಸೋಮವಾರ, ದಿನಾಂಕ : 22ನೇ ಜುಲೈ, 2019

ರಾಜ್ಯದ ಒಳಗೆ ಮತ್ತು ಹೊರಗೆ ಇರುವ ಪ್ರವಾಸಿಮಂದಿರ ಮತ್ತು ಕರ್ನಾಟಕ ಭವನಗಳ ಬಗ್ಗೆ

ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

431 (669) ಮಾನ್ಯ ಪ್ರವಾಸೋದ್ಯಮ ಮತ್ತು ರೇಷ್ಮೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದ ಒಳಗೆ ಮತ್ತು ಹೊರಗೆ ಇರುವ ಪ್ರಮುಖ ಪ್ರವಾಸಿ ತಾಣಗಳಲ್ಲಿ ಸರ್ಕಾರದ ವತಿಯಿಂದ ನಿರ್ಮಾಣವಾದ ಪ್ರವಾಸಿ ಮಂದಿರ ಮತ್ತು ಕರ್ನಾಟಕ ಭವನಗಳಲ್ಲಿ ಅಗತ್ಯ ಮೂಲ ಸೌಲಭ್ಯಗಳ ಮತ್ತು ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ತೆಗೆದುಕೊಂಡ ಕ್ರಮಗಳೇನು ; (ವಿವರವಾದ ಮಾಹಿತಿ ನೀಡುವುದು)

(ಆ) ಮಂಡ್ಯ ಜಿಲ್ಲೆ ವ್ಯಾಪ್ತಿಯ ವಿವಿಧ ಪ್ರವಾಸಿ ತಾಣಗಳಲ್ಲಿ ಈವರೆವಿಗೆ ಎಷ್ಟು ಯಾತ್ರಿ ನಿವಾಸಗಳನ್ನು ನಿರ್ಮಾಣ ಮಾಡಲಾಗಿದೆ ; (ತಾಲ್ಲೂಕುವಾರು ವಿವರವಾದ ಮಾಹಿತಿ ನೀಡುವುದು) ಕಾಮಗಾರಿ ಅಪೂರ್ಣಗೊಂಡಿರುವ ಯಾತ್ರಿನಿವಾಸಗಳ ಸಂಖ್ಯೆ ಎಷ್ಟು ; ಕಾಮಗಾರಿ ವಿಳಂಬಕ್ಕೆ ಕಾರಣವೇನು ;

(ಇ) ಕಾಮಗಾರಿ ಪೂರ್ಣಗೊಂಡು ಉದ್ಘಾಟನೆಯಾಗದಿರುವ ಯಾತ್ರಿ ನಿವಾಸಗಳ ಸಂಖ್ಯೆ ಎಷ್ಟು : ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು ?